ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1085 (1397)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು

ವಿಷಯ : ರಾಜ್ಯ ಗಣಿ ಮತ್ತು ಭೂ ವಿಜ್ಞಾನ ಇಲಾಖಾ ವ್ಯಾಪ್ತಿಗೆ ಸಂದಾಯವಾಗುತ್ತಿರುವ ವಿವಿಧ ರೀತಿಯ ರಾಜಧನಗಳ ಬಗ್ಗೆ

(ಅ) ರಾಜ್ಯ ಗಣಿ ಮತ್ತು ಭೂ ವಿಜ್ಞಾನ ಇಲಾಖಾ ವ್ಯಾಪ್ತಿಗೆ ಸಂದಾಯವಾಗುತ್ತಿರುವ ವಿವಿಧ ರೀತಿಯ ರಾಜಧನಗಳ ವಾರ್ಷಿಕ ಮೊತ್ತ ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು) ರಾಜಧನ ನಿಗದಿಪಡಿಸುವಲ್ಲಿ ಸರ್ಕಾರದ ನೀತಿ ನಿಯಮಗಳು ಮತ್ತು ಮಾನದಂಡಗಳು ಯಾವುವು;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜಧನ ಪರಿಷ್ಕರಣೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಪರಿಷ್ಕರಣೆಯಿಂದ ಸರ್ಕಾರದ ಬೊಕ್ಕಸಕ್ಕೆ ಬರುತ್ತಿರುವ ಹೆಚ್ಚುವರಿ ಮೊತ್ತದ ಪ್ರಮಾಣ ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ಉಪ ಖನಿಜ ಗಣಿಗಾರಿಕೆ ಮತ್ತು ಪರವಾನಿಗೆ ಇಲ್ಲದ ಸಾಗಾಣಿಕೆÉ ಯಂತ್ರ ಅಕ್ರಮ ವ್ಯವಹಾರಗಳಲ್ಲಿ ತೊಡಗಿಸಿಕೊಂಡಿರುವ ಎಷ್ಟು ಪ್ರಕರಣಗಳನ್ನು ಗುರುತಿಸಿ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗಿದೆ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಕರ್ನಾಟಕ ಉಪ ಖನಿಜ ರಿಯಾಯಿತಿ ಕಾಯ್ದೆ (ತಿದ್ದುಪಡಿ), 2020ರಲ್ಲಿ ನಮೂದಿತ ಪ್ರಮುಖ ಪರಿಣಾಮಕಾರಿ ಅಂಶಗಳು ಯಾವುವು ?